AUGUST 27 2024

ALL INDIA RADIO- DHARWAD

PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಸಂಗೊಳ್ಳಿ ರಾಯಣ್ಣರ ದೇಶಪ್ರೇಮ ಎಲ್ಲರಿಗೂ ಪ್ರೇರಣಾದಾಯಕ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ಕೇಂದ್ರ, ರಾಜ್ಯ ಸರ್ಕಾರಗಳ ಸೌಲಭ್ಯ, ಜನಸಾಮಾನ್ಯರಿಗೆ ತಲುಪಿಸುವಂತೆ ಕಾರ್ಯ ನಿರ್ವಹಿಸಲು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ.
- ಈಡಿಸ್ ಸೊಳ್ಳೆಗಳನ್ನು ನಾಶಪಡಿಸುವ ಓವಿ ಟ್ರ್ಯಾಪ್ ಸಾಧನ, ರಾಜ್ಯಾದ್ಯಂತ ಅಳವಡಿಸಲು ಚಿಂತನೆ – ಸಚಿವ ದಿನೇಶ್ ಗುಂಡೂರಾವ್.
- ಸೆಪ್ಟೆಂಬರ್ 15 ರಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನ; ಪ್ರಜಾಪ್ರಭುತ್ವದ ಮೌಲ್ಯಗಳನ್ನು ಪಸರಿಸಲು ತೀರ್ಮಾನ – ಸಚಿವ ಡಾಕ್ಟರ್ ಎಚ್.ಸಿ.ಮಹದೇವಪ್ಪ.

ಈಗ ವಾರ್ತೆಗಳ ವಿವರ

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕಿತ್ತೂರು ಸಂಸ್ಥಾನದಲ್ಲಿ ಸೈನಿಕರಾಗಿ, ರಾಣಿ ಚನ್ನಮ್ಮರ ಬಲಗೈ ಬಂಟರಾಗಿ ಕಿತ್ತೂರು ಸಂಸ್ಥಾನದ ಉಳಿವಿಗೆ ಬ್ರಿಟಿ ್ ವಿರುದ್ಧ ಹೋರಾಡಿದ ಮಹಾನ್ ಚೇತನ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಗೋಕಾಕ ತಾಲ್ಲೂಕಿನ ಕೌಜಲಗಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣರ ಕಂಚಿನ ಪ್ರತಿಮೆ ಹಾಗೂ ಕಲ್ಲಿನ ಕಿರು ಕೋಟೆ ಅನಾವರಣಗೊಳಿಸಿ ಮಾತನಾಡಿದ ಅವರು, ಸಂಗೊಳ್ಳಿ ರಾಯಣ್ಣರ ದೇಶಪ್ರೇಮ ನಮ್ಮೆಲ್ಲರಿಗೂ ಪ್ರೇರಣಾದಾಯಕ. ಮುಂದಿನ ಪೀಳಿಗೆ ಸಂಗೊಳ್ಳಿ ರಾಯಣ್ಣರ ಆದರ್ಶ ತತ್ವಗಳನ್ನು ಮೈಗೂಡಿಸಿಕೊಂಡು, ಉತ್ತಮ ಪ್ರಜೆಗಳಾಗಬೇಕು ಎಂದರು. ಇದಕ್ಕೂ ಮುನ್ನ ಗೋಕಾಕದ ಕಳ್ಳಿಗುದ್ದಿ ಗ್ರಾಮದಲ್ಲಿ ಕ್ರಾಂತಿವೀರ ಸಂಗೊಳ್ಳಿರಾಯಣ್ಣರ ಪ್ರತಿಮೆ ಲೋಕಾರ್ಪಣೆಗೊಳಿಸಿ ಮಾತನಾಡಿದ ಮುಖ್ಯಮಂತ್ರಿ, ರಾಯಣ್ಣರ ದೇಶಪ್ರೇಮವನ್ನು ಶಾಶ್ವತಗೊಳಿಸುವ ಉದ್ದೇಶದಿಂದ ಅವರ ಜನ್ಮಸ್ಥಳ ಸಂಗೊಳ್ಳಿಯಲ್ಲಿ ಸೈನಿಕ ಶಾಲೆ ಆರಂಭಿಸಲಾಗಿದೆ ಎಂದರು.

*******

ಕೇಂದ್ರ ಸಚಿವ ಸಂಪುಟ, ಕೇಂದ್ರ ಸರ್ಕಾರಿ ನೌಕರರಿಗಾಗಿ ಪ್ರಕಟಿಸಿರುವ ಏಕೀಕೃತ ಪಿಂಚಣಿ ವ್ಯವಸ್ಥೆ – ಯುಪಿಎಸ್ ಕುರಿತು ಪರಿಶೀಲನೆ ನಡೆಸಲಾಗುತ್ತಿದೆ. ಆನಂತರ ರಾಜ್ಯ ಸರ್ಕಾರದ ನಿರ್ಧಾರ ಪ್ರಕಟಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಳಗಾವಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಳಗಾವಿ ಜಿಲ್ಲೆಯನ್ನು ಆಡಳಿತಾತ್ಮಕ ದೃಷ್ಟಿಯಿಂದ ಎರಡು ಜಿಲ್ಲೆಗಳನ್ನಾಗಿ ವಿಭಜನೆ ಮಾಡುವ ಸಂಬಂಧ, ಜಿಲ್ಲೆಯ ಶಾಸಕರ ಜೊತೆ ಚರ್ಚಿಸಲಾಗುವುದು ಎಂದರು.

ಪರಪ್ಪನ ಅಗ್ರಹಾರ ಜೈಲಿನಲ್ಲಿರುವ ನಟ ದರ್ಶನ್ ಹಾಗೂ ಮತ್ತಿತರರಿಗೆ ವಿಶೇ ್ ಸೌಲಭ್ಯ ಕಲ್ಪಿಸಿರುವ ಪ್ರಕರಣವನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಈಗಾಗಲೇ 7 ಜೈಲು ಅಧಿಕಾರಿಗಳನ್ನು ಅಮಾನತು ಮಾಡಲಾಗಿದೆ.

ಪರಪ್ಪನ ಅಗ್ರಹಾರ ಜೈಲಿಗೆ ತೆರಳಿ ಪರಿಶೀಲಿಸಿ ವರದಿ ನೀಡುವಂತೆ ಪೊಲೀಸ್ ಮಹಾ ನಿರ್ದೇಶಕರಿಗೆ ಸೂಚಿಸಲಾಗಿದೆ. ಜೊತೆಗೆ, ಗೃಹ ಸಚಿವರೂ ಭೇಟಿ ನೀಡಿ, ಪರಿಶೀಲಿಸಲಿದ್ದಾರೆ. ವರದಿ ಬಂದ ನಂತರ ಮುಂದಿನ ಕ್ರಮ ಜರುಗಿಸಲಾಗುವುದು ಎಂದು ಹೇಳಿದರು.

*******

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಸೌಲಭ್ಯಗಳನ್ನು ಜನಸಾಮಾನ್ಯರಿಗೆ ತಲುಪಿಸಲು ಅಧಿಕಾರಿಗಳು ಪ್ರಾಮಾಣಿಕ ಪ್ರಯತ್ನಿಸಬೇಕು. ಸೌಲಭ್ಯಗಳನ್ನು ಪಕ್ಷಾತೀತವಾಗಿ ಅರ್ಹ ಫಲಾನುಭವಿಗಳಿಗೆ ತಲುಪುವಂತೆ ನೋಡಿಕೊಳ್ಳಬೇಕು ಎಂದು ಕೇಂದ್ರ ಭಾರಿ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ ಸೂಚಿಸಿದ್ದಾರೆ. ಮಂಡ್ಯ ಜಿಲ್ಲೆಯ ಸಮಗ್ರ ಅಭಿವೃದ್ಧಿ ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಕಾರ್ಯಕ್ರಮಗಳ ಅನು ಷ್ಠಾನ ಕುರಿತು ಮಂಡ್ಯದಲ್ಲಿ ನಿನ್ನೆ ನಡೆದ ದಿಶಾ ಸಭೆಯಲ್ಲಿ ಮಾತನಾಡಿದ ಅವರು, ಮನ್ರೇಗಾ, ಪ್ರಧಾನಮಂತ್ರಿ ಆವಾಸ್ ಯೋಜನೆ ಸೇರಿದಂತೆ ಇನ್ನಿತರ ಪ್ರಮುಖ ಯೋಜನೆಗಳನ್ನು ಜನರಿಗೆ ತಲುಪಿಸಲು ಪ್ರಾಮಾಣಿಕವಾಗಿ ಕಾರ್ಯ ನಿರ್ವಹಿಸುವಂತೆ ಸಲಹೆ ನೀಡಿದರು.

*******

ಓವಿ ಟ್ರ್ಯಾಪ್ ಸಾಧನಗಳಿಂದ ಈಡಿಸ್ ಸೊಳ್ಳೆಗಳ ನಿಯಂತ್ರಣ ಸಾಧ್ಯವಾದರೆ ಡೆಂಘಿ, ಮಲೇರಿಯಾದಂತಹ ಸಾಂಕ್ರಾಮಿಕ ರೋಗಗಳನ್ನು ನಿಯಂತ್ರಣಕ್ಕೆ ತರಬಹುದು ಎಂದು ಆರೋಗ್ಯ ಖಾತೆ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಬೆಂಗಳೂರಿನ ಗೋಪಾಲಪುರದಲ್ಲಿ ಅಳವಡಿಸಲಾದ ಡೆಂಘಿ, ಮಲೇರಿಯಾದಂತಹ ಸಾಂಕ್ರಾಮಿಕ ರೋಗ ಹರಡುವ ಈಡಿಸ್ ಸೊಳ್ಳೆಗಳನ್ನು ಆಕರ್ಷಿಸಿ ನಾಶಪಡಿಸುವ ಓವಿ ಟ್ರ್ಯಾಪ್ ಸಾಧನಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಾಯೋಗಿಕವಾಗಿ ಗೋಪಾಲಪುರದಲ್ಲಿ 120 ಓವಿ ಟ್ರ್ಯಾಪ್ ಸಾಧನಗಳನ್ನು ಮನೆ ಮನೆಗಳಿಗೆ ಅಳವಡಿಸಲಾಗಿದೆ. ಓವಿ ಟ್ರ್ಯಾಪ್ ಬಯೋ ಸಾಧನವಾಗಿದ್ದು, ಈಡಿಸ್ ಸೊಳ್ಳೆಗಳನ್ನು ಆಕರ್ಷಿಸಿ ನಾಶಪಡಿಸುತ್ತದೆ. ಉತ್ತಮ ಫಲಿತಾಂಶ ದೊರೆತರೆ ರಾಜ್ಯಾದ್ಯಂತ ಓವಿ ಟ್ರ್ಯಾಪ್ ಸಾಧನಗಳನ್ನು ಅಳವಡಿಸಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

*******

ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ದೇಶವಾದ ಭಾರತದ ಮುಂದಿನ ಪೀಳಿಗೆಯು ಪ್ರಜಾಪ್ರಭುತ್ವದ ಮೌಲ್ಯಾನುಸಾರ ಶಕ್ತವಾಗಬೇಕಾದರೆ ಪ್ರಜಾಪ್ರಭುತ್ವದ ಮೌಲ್ಯಗಳ ಕುರಿತು ಅರಿವಿನ ಜಾಗೃತಿ ಅತ್ಯಂತ ಅಗತ್ಯವಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಸಚಿವ ಡಾಕ್ಟರ್ ಎಚ್.ಸಿ. ಮಹದೇವಪ್ಪ ಹೇಳಿದ್ದಾರೆ. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ಬೆಂಗಳೂರಿನಲ್ಲಿ ಆಯೋಜಿಸಿದ್ದ ಪೂರ್ವಸಿದ್ಧತಾ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ರಾಜ್ಯ ಸರ್ಕಾರವು ಬೃಹತ್ ಮಾನವ ಸರಪಳಿಯನ್ನು ರಚಿಸುವ ಮೂಲಕ ವಿಭಿನ್ನವಾಗಿ ಆಚರಿಸಲಿದೆ ಎಂದರು. ಸೆಪ್ಟೆಂಬರ್ 15 ರಂದು ಜರುಗುತ್ತಿರುವ ಈ ಬೃಹತ್ ಕಾರ್ಯಕ್ರಮದಲ್ಲಿ ಬೀದರ್‌ನಿಂದ ಚಾಮರಾಜನಗರದ ವರೆಗೆ ಬೃಹತ್ ಮಾನವ ಸರಪಳಿಯನ್ನು ನಿರ್ಮಿಸಿ, ಪ್ರಜಾಪ್ರಭುತ್ವದ ಮೌಲ್ಯಗಳನ್ನು ದಾರಿಯುದ್ದಕ್ಕೂ ಪಸರಿಸುವ ಕೆಲಸವನ್ನು ಸರ್ಕಾರ ಮಾಡಲಿದ್ದು, ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಮಾನವ ಸರಪಳಿಯ ಜವಾಬ್ದಾರಿಯನ್ನು ವಹಿಸಲಿದ್ದಾರೆ ಎಂದರು. ಪ್ರಜಾಪ್ರಭುತ್ವದ ಭಾಗವಾಗಿರುವ ಎಲ್ಲರೂ ಅದರ ಮೌಲ್ಯಗಳನ್ನು ಬಿಂಬಿಸುವುದಕ್ಕೆ ಪೂರಕವಾಗಿ ಚಟುವಟಿಕೆಗಳನ್ನು ಮಾಡಬಹುದು ಮತ್ತು ಮಾನವ ಸರಪಳಿಯಲ್ಲಿ ಪಾಲ್ಗೊಳ್ಳಬಹುದು. ಸೆಪ್ಟೆಂಬರ್ 15 ರಂದು ಬೆಳಗ್ಗೆ 8.30 ಕ್ಕೆ ಆರಂಭಗೊಳ್ಳುವ ಈ ಕಾರ್ಯಕ್ರಮದಲ್ಲಿ ಸುಮಾರು 40 ಲಕ್ಷ ಜನರು ಪಾಲ್ಗೊಳ್ಳುವ ನಿರೀಕ್ಷೆ ಇದೆ ಎಂದು ಸಚಿವರು ತಿಳಿಸಿದ್ದಾರೆ.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

*******

ಅನ್ನಭಾಗ್ಯದ ಪಡಿತರ ಅಕ್ಕಿಯಲ್ಲಿ ಸ್ವಲ್ಪ ಪ್ರಮಾಣದ ಅಕ್ಕಿ ನೀರಿನಲ್ಲಿ ಮುಳುಗದೆ ನೀರಿನಲ್ಲಿ ತೇಲುತ್ತಿರುವುದನ್ನು ಕಂಡು ಅದು ಪ್ಲಾಸ್ಟಿಕ್ ಅಕ್ಕಿ ಎಂದು ಜನ ಗೊಂದಲಕ್ಕೆ ಈಡಾಗಿರುವುದು ವರದಿಯಾಗಿದೆ. ಆದರೆ ಇದು ಆತಂಕ ಪಡುವ ವಿಷಯವಲ್ಲ ಎಂದು ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ತಿಳಿಸಿದೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ಮೂಲಕ ಮಾಹಿತಿ ನೀಡಿರುವ ಇಲಾಖೆ, ನಿಮ್ಮ ಮನೆಗೆ ತಂದ ಅನ್ನಭಾಗ್ಯದ ಅಕ್ಕಿಯಲ್ಲಿ ಪ್ಲಾಸ್ಟಿಕ್ ಅಕ್ಕಿಯಂತಹ ಕಾಳುಗಳು ಇದ್ದಲ್ಲಿ ಆತಂಕ ಪಡದಿರಿ ಮತ್ತು ಅದನ್ನು ಎಸೆಯದಿರಿ. ಏಕೆಂದರೆ ಅದು ಪ್ಲಾಸ್ಟಿಕ್ ಅಕ್ಕಿಯಲ್ಲ, ನಿಮ್ಮ ಆರೋಗ್ಯವನ್ನು ಉತ್ತಮವಾಗಿಸುವ ಪೌಷ್ಟಿಕಾಂಶವುಳ್ಳ ಸಾರವರ್ಧಿತ ಅಕ್ಕಿ. ಕೇಂದ್ರ ಸರ್ಕಾರದ ಸಚಿವಾಲಯದ ಮಾರ್ಗಸೂಚಿಯಂತೆ ಪ್ರತಿ 1 ಕೆ.ಜಿ.

ಅಕ್ಕಿಗೆ 10 ಗ್ರಾಂ. ನ ್ಟ ಸಾರವರ್ಧಿತ ಅಕ್ಕಿಯನ್ನು ಬೆರೆಸಲಾಗುತ್ತದೆ. ಇದು ವ್ಯಕ್ತಿಯ ಆರೋಗ್ಯಕ್ಕೆ ಅಗತ್ಯವಾದ ಜೀವಸತ್ವಗಳು, ಸೂಕ್ಷ್ಮ ಪೌಷ್ಠಿಕಾಂಶಗಳನ್ನು ಒದಗಿಸುತ್ತದೆ. ಈ ಸಾರವರ್ಧಿತ ಅಕ್ಕಿಯು ನಿಮ್ಮ ಆರೋಗ್ಯವನ್ನು ಉತ್ತಮಗೊಳಿಸುತ್ತದೆ ಮತ್ತು ರಕ್ತಹೀನತೆ, ಅಪೌಷ್ಟಿಕತೆಯನ್ನು ಹೋಗಲಾಡಿಸುತ್ತದೆ. ಪ್ರಯೋಗಾಲಯದಿಂದ ಪರೀಕ್ಷೆಗೆ ಒಳಪಟ್ಟ ಸಾರವರ್ಧಿತ ಅಕ್ಕಿಯನ್ನು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದಿಂದ ಬಳಕೆಗೆ ಯೋಗ್ಯವಾದ ಪೌಷ್ಠಿಕಾಂಶಭರಿತವಾದ ಅಕ್ಕಿ ಎಂದು ಪರಿಗಣಿಸಲಾಗಿರುತ್ತದೆ ಎಂದು ವಾರ್ತಾ ಇಲಾಖೆ ತಿಳಿಸಿದೆ.

*******

ಕೇಂದ್ರ ಸರ್ಕಾರದ ಸಂಪೂರ್ಣತಾ ಅಭಿಯಾನದಡಿ ವಿಜಯಪುರ ಜಿಲ್ಲೆಯ ತಾಳಿಕೋಟೆ ತಾಲೂಕನ್ನು ಮಹತ್ವಾಕಾಂಕ್ಷಿ ಘಟಕ ಎಂದು ಘೋಷಿಸಲಾಗಿದೆ. ಈ ಅಭಿಯಾನದಡಿ ವಿವಿಧ ಮಾನದಂಡಗಳನ್ನು ಆಧರಿಸಿ, ಎರಡು ವಿಧಾನಸಭಾ ಕ್ಷೇತ್ರಗಳಾದ ದೇವರಹಿಪ್ಪರಗಿ ಹಾಗೂ ಮುದ್ದೇಬಿಹಾಳದ ಕೆಲ ಗ್ರಾಮಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾಕ್ಟರ್ ಬಸವರಾಜ ಹುಬ್ಬಳ್ಳಿ ಆರೋಗ್ಯ ಕ್ಷೇತ್ರದಲ್ಲಿನ ಅಭಿವೃದ್ಧಿ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

ಧ್ವನಿ : ಡಾ.ಬಸವರಾಜ ಹುಬ್ಬಳ್ಳಿ (60 ಸೆಕೆಂದುಗಳು)

*******

ಬೀದರ ಜಿಲ್ಲೆಯಲ್ಲಿ ನಡೆಯುತ್ತಿರುವ ವಿವಿಧ ಇಲಾಖೆಯ ಕಾಮಗಾರಿಗಳನ್ನು ಕಾಲ ಮಿತಿಯಲ್ಲಿ ಮುಗಿಸುವುದರ ಜೊತೆಗೆ ಗುಣಮಟ್ಟವನ್ನು ಕಾಯ್ದುಕೊಳ್ಳಬೇಕು ಎಂದು ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಹೇಳಿದ್ದಾರೆ. ಬೀದರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಯೋಜನೆ ಅಡಿಯಲ್ಲಿ 2024–25ನೇ ಸಾಲಿಗೆ ಮಂಜೂರಾತಿಯಾಗಿರುವ ಅನುದಾನಕ್ಕೆ ಕ್ರಿಯಾ ಯೋಜನೆ ಸಿದ್ಧಪಡಿಸಲು ಕರೆದ ಜಿಲ್ಲಾ ಸಲಹಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ರಸ್ತೆ, ಬ್ರಿಡ್ಜ್, ವಸತಿ ನಿಲಯಗಳ ಕಟ್ಟಡ, ಶಾಲೆಗಳಿಗೆ ಬೇಕಾಗುವ ಮೂಲಭೂತ ಸೌಲಭ್ಯಗಳ ಕುರಿತು ಪ್ರಸ್ತಾವ ಸಲ್ಲಿಸಬೇಕು. ಕಳೆದ ವ ್ 
ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ವಿವಿಧ ಇಲಾಖೆಗಳಿಗೆ ಮಂಜೂರಾದ ಹಣ ಹಾಗೂ ಅವುಗಳ ಖರ್ಚು–ವೆಚ್ಚದ ಕುರಿತು ಮಾಹಿತಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

*******